ಅ) *ತುಮಕೂರು ಜಿಲ್ಲೆ ಮತ್ತು ಕುಣಿಗಲ್ ವಿಧಾನ ಸಭಾ ಕ್ಷೇತ್ರದಲ್ಲಿ ಎಷ್ಟು ಗ್ರಂಥಾಲಯಗಳನ್ನು ತೆರೆಯಲಾಗಿದೆ?*

ಶ್ರೀ ಆರ್. ಕೃಷ್ಣಪ್ಪ (ವಯಸ್ಕರ ಶಿಕ್ಷಣ ಮತ್ತ ಸಾರ್ವಜನಿಕ ಗ್ರಂಥಾಲಯ ರಾಜ್ಯ ಸಚಿವರು) :

ಅ) ಗ್ರಾಮೀಣ ಪ್ರೇದೇಶಗಳಲ್ಲಿ 1997-98ನೇ ಸಾಲಿನಲ್ಲಿ 500 ಗ್ರಾಮ ಪಂಚಾಯಿತಿ ಗ್ರಂಥಾಲಯಗಳನ್ನು ತೆರೆಯಲಾಗಿದೆ.

ಆ) ತುಮಕೂರು ಜಿಲ್ಲೆಯಲ್ಲಿ ಒಟ್ಟು 24 ಗ್ರಾಮೀಣ ಗ್ರಂಥಾಲಯಗಳನ್ನು ತೆರೆಯಲಾಗಿದ್ದು ಅದರಲ್ಲಿ ಕುಣಿಗಲ್ ವಿಧಾನ ಸಭಾ ಕ್ಷೇತ್ರದ ಗ್ರಾಮೀಣ ಪ್ರದೇಶಗಳಲ್ಲಿ 3 ಗ್ರಾಮ ಪಂಚಾಯಿತಿ ಗ್ರಂಥಾಲಯಗಳನ್ನು ತೆರೆಯಲಾಗಿದೆ.

ಸ್ವಸ್ತಿ ಯೋಜನೆಯ ಅನುಷ್ಠಾನ.

1583 - ಶ್ರೀ ಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಸ್ವಸ್ತಿ ಗ್ರಾಮ ಯೋಜನೆಯಲ್ಲಿ ಇದುವರೆವಿಗೆ ಸರ್ಕಾರದ ಸಾಧನೆ ಮತ್ತು ಪ್ರಗತಿ ಎಷ್ಟು?*

ಆ) *ಕುಣಿಗಲ್ ವಿಧಾನಸಭಾ ಕ್ಷೇತ್ರ ಮತ್ತು ತುಮಕೂರು ಜಿಲ್ಲೆಯಲ್ಲಿ ಈ ಯೋಜನೆಯಡಿಯಲ್ಲಿ ತೆಗೆದುಕೊಂಡಿರುವ ಕ್ರಮಗಳಾವುವು?*

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು) :

ಅ) ಮೈಸೂರು ಜಿಲ್ಲೆಯ ಉದ್ಬೂರು ಗ್ರಾಮ ಈಗಾಗಲೇ ಉದ್ಘಾಟನೆಗೊಂಡಿದ್ದು, ಅಭಿವೃದ್ಧಿ ಕಾರ್ಯಗಳು ಪ್ರಗತಿಯ ಹಂತದಲ್ಲಿದೆ. ಉತ್ತರ ಕನ್ನಡ ಜಿಲ್ಲೆಯ ಪಾಲಾ ಗ್ರಾಮ ಪ್ರಗತಿಯಲ್ಲಿದೆ; ಬಳ್ಳಾರಿ ಜಿಲ್ಲೆಯ ಚಿಂತ್ರಪಳ್ಳಿ ಗ್ರಾಮದಲ್ಲಿ ಈಗಾಗಲೇ ಪ್ರಾಯೋಜಕರ ಮುಖಾಂತರ ಅಭಿವೃದ್ಧಿ ಕಾರ್ಯಕ್ರಮಗಳು ಪ್ರಾರಂಭವಾಗಿದ್ದು ಪ್ರಗತಿಯಲ್ಲಿದೆ.

ಆ) ಸ್ವಸ್ತಿ ಗ್ರಾಮ ಯೋಜನೆಯಲ್ಲಿ ಈಗಾಗಲೇ ಆಯ್ಕೆ ಮಾಡಿರುವ 20 ಗ್ರಾಮಗಳಲ್ಲಿ ಕುಣಿಗಲ್ ತಾಲ್ಲೂಕು ಕಗ್ಗರೆ ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ. ಸದರಿ ಗ್ರಾಮದ ಅಭಿವೃದ್ಧಿಗಾಗಿ ಪ್ರಾಯೋಜಕರನ್ನು ಆಳವಡಿಸಿಕೊಳ್ಳುವ ಬಗ್ಗೆ ಪ್ರಯತ್ನಗಳು ನಡೆಯುತ್ತಿದೆ.

ಆನೇಕಲ್ ತಾಲ್ಲೂಕು ಪಂಚಾಯ್ತಿಗಳಲ್ಲಿ ಹಣ ದುರುಪಯೋಗ.

1584 - ಶ್ರೀ ಎ. ನಾರಾಯಣಸ್ವಾಮಿ (ಆನೇಕಲ್) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಆನೇಕಲ್ ತಾಲ್ಲೂಕು ಗ್ರಾಮ ಪಂಚಾಯತ್‌ಗಳಲ್ಲಿ ಹಣ ದುರುಪಯೋಗ ಆಗಿರುವ ದೂರುಗಳು ಏನಾದರೂ ಸರ್ಕಾರದ ಗಮನಕ್ಕೆ ಬಂದಿದೆಯೇ?*